# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಸರ್ಕಾರದ ಜೀತವಿಮುಕ್ತರ ಪುನರ್ವಸತಿ ಸಹಾಯಧನ ಯೋಜನೆಯಡಿ **ಮೈಸೂರು** ಜಿಲ್ಲೆಯ ಹೆಚ್.ಡಿ. ಕೋಟೆ ತಾಲ್ಲೂಕಿನ 253 ಜನ ಜೀತವಿಮುಕ್ತರಿಗೆ 2013-14 ನೇ ಸಾಲಿನಲ್ಲಿ ಪೂರ್ಣ ಮಾಶಾಸನ ಸಹಾಯಾನುಧನವನ್ನು ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂ.ಗ್ರಾಅಪ.15.ಆರ್‌ಬಿಎಲ್.2004 ದಿನಾಂಕ:21-1-2006.
2. ಉಪವಿಭಾಗಾಧಿಕಾರಿ, ಹುಣಸೂರು ಉಪವಿಭಾಗ ಮೈಸೂರು ಇವರು ಜಿಲ್ಲಾ ಪಂಚಾಯತಿಗೆ ಬರೆದಿರುವ ಪತ್ರ ಸಂ:ಆರ್‌ಬಿಎಲ್-3/2011-12 ದಿ:27-04-2012
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರು ಸರ್ಕಾರಕ್ಕೆ ವರದಿ ಮಾಡಿರುವ ಪತ್ರಸಂ:ಡಿಇವಿ-3/ಜೀವಿಮು/28/2012-13 ದಿನಾಂಕ:23-09-2013

**ಪ್ರಸ್ತಾವನೆ:-**

*******

ಜೀತಕಾರ್ಮಿಕರನ್ನು ಜೀತಪದ್ಧತಿಯಿಂದ ಬಿಡುಗಡೆಗೊಳಿಸಿದ ನಂತರ, ಅವರುಗಳಿಗೆ ಕನಿಷ್ಠ ಆರ್ಥಿಕ ಸವಲತ್ತನ್ನು ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಜೀತವಿಮುಕ್ತರ ಪುನರ್ವಸತಿ ಸಹಾಯಧನ ಎಂಬ ಹೊಸ ಯೋಜನೆಯನ್ನು ರೂಪಿಸಿದ್ದು, ದಿನಾಂಕ:21-01-2006ರಿಂದ ಈ ಯೋಜನೆಯನ್ನು ರಾಜ್ಯಾದ್ಯಂತ ಜಾರಿಗೆ ತರಲಾಗಿದೆ. ಈ ಯೋಜನೆಯಡಿ ರೂಪಿಸಿರುವ ನಿರ್ದೇಶನದಂತೆ, ದಿನಾಂಕ:21-01-2006ರ ತರುವಾಯ ಜೀತಪದ್ಧತಿಯಿಂದ ಬಿಡುಗಡೆಗೊಳಿಸುವ ರಾಜ್ಯದ ಪ್ರತಿ ಜೀತ ಕಾರ್ಮಿಕ/ಬಾಲ ಜೀತಕಾರ್ಮಿಕರಿಗೆ ಮಾಹೆಯಾನ ರೂ.300.00 ರಂತೆ ಸಹಾಯಧನವನ್ನು **ಜೀತಪದ್ಧತಿಯಿಂದ ಬಿಡುಗಡೆಗೊಳಿಸಿದ ದಿನದಿಂದ ಮೊದಲ** 24 **ತಿಂಗಳುಗಳ ಅವಧಿಗೆ ಪಾವತಿಸಬೇಕಾಗುತ್ತದೆ.**

ಉಪವಿಭಾಗಾಧಿಕಾರಿ **ಹುಣಸೂರು ಉಪವಿಭಾಗ ಇವರು ಮೈಸೂರು ಜಿಲ್ಲೆಯ ಹೆಚ್.ಡಿ ಕೋಟೆ** ತಾಲ್ಲೂಕಿಗೆ ಸೇರಿದ 253 ಜನ ಜೀತದಾಳುಗಳ ಇರುವಿಕೆಯ ಬಗ್ಗೆ ಪರಿಶೀಲನೆ ನಡೆಸಿ ಅವರುಗಳನ್ನು ದಿನಾಂಕ:31-10-2011ರಂದು ಜೀತವಿಮುಕ್ತಗೊಳಿಸಿ **ಜೀತವಿಮುಕ್ತ ಪತ್ರ**ಗಳನ್ನು ವಿತರಿಸಿರುವ ಕುರಿತಾಗಿ ಉಲ್ಲೇಖ (2)ರನ್ವಯ ಜಿಲ್ಲಾ ಪಂಚಾಯತ್ ಮೈಸೂರು ರವರಿಗೆ ವರದಿಮಾಡಿರುತ್ತಾರೆ. ಈ ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಮೈಸೂರು ರವರು ಒಟ್ಟು 253 ಜನ ಜೀತವಿಮುಕ್ತರಿಗೆ ರಾಜ್ಯ ಸರ್ಕಾರದ ಜೀತವಿಮುಕ್ತರ ಪುನರ್ವಸತಿ ಸಹಾಯಧನ ಬಿಡುಗಡೆ ಮಾಡಲು ಉಲ್ಲೇಖ (3)ರ ಪತ್ರದಲ್ಲಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೈಸೂರು ಜಿಲ್ಲೆಯ ಹೆಚ್.ಡಿ ಕೋಟೆ ತಾಲ್ಲೂಕಿನ ಒಟ್ಟು 253 ಜೀತ ವಿಮುಕ್ತರಿಗೆ (**ಪರಿಶಿಷ್ಟಜಾತಿ-176, ಪರಿಶಿಷ್ಟ ಪಂಗಡ-36 ಹಾಗೂ ಸಾಮಾನ್ಯ ವರ್ಗಕ್ಕೆ ಸೇರಿದ -41 ಜನ ಜೀತವಿಮುಕ್ತರಿಗೆ**) ಮಾಶಾಸನ ಸಹಾಯಾನುಧನವನ್ನು ಒದಗಿಸುವುದು ಅವಶ್ಯವಿದ್ದು, 2013-14ನೇ ಸಾಲಿನಲ್ಲಿ ರಾಜ್ಯ ಸರ್ಕಾರದ ಆಯವ್ಯಯದಡಿ ಲೆಕ್ಕಶೀರ್ಷಿಕೆ 2230-01-198-06-01-300 (2230-01-101-0-01) (ಯೋಜನೆ)ಯಡಿ ಒದಗಿಸಿರುವ ಒಟ್ಟು ರೂ.68.00ಲಕ್ಷ ಅನುದಾನದಿಂದ, ರೂ.18,21,600/- ಗಳ ಅನುದಾನವನ್ನು ಮೈಸೂರು ಜಿಲ್ಲಾ ಪಂಚಾಯಿತಿಗೆ ಬಿಡುಗಡೆಗೊಳಿಸಲು ತೀರ್ಮಾನಿಸಿದೆ. ಆದರಿಂದ ಈ ಬಿಡುಗಡೆ ಆದೇಶ.

## ಸರ್ಕಾರದ ಆದೇಶ ಸಂ.ಗ್ರಾಅಪ.05.ಆರ್‌ಬಿಎಲ್.2012 ಬೆಂಗಳೂರು, ದಿನಾಂಕ:12-12-2013

ರಾಜ್ಯ ಸರ್ಕಾರದ **ಜೀತವಿಮುಕ್ತರ ಪುನರ್ವಸತಿ ಸಹಾಯಧನ ಯೋಜನೆಯಡಿ** ಮೈಸೂರಯ ಜಿಲ್ಲೆಯ ಹೆಚ್.ಡಿ ಕೋಟೆ ತಾಲ್ಲೂಕಿನ 253 ಜನ ಜೀತವಿಮುಕ್ತರಿಗೆ 2013-14ನೇ ಸಾಲಿನಲ್ಲಿ ಒಟ್ಟು 24 ತಿಂಗಳ ಅವಧಿಗೆ (ನವೆಂಬರ್-2011 ರಿಂದ ಅಕ್ಟೋಬರ್-2013ರ ವರೆಗೆ) ತಗಲುವ ಒಟ್ಟು ರೂ.18,21,600/- (ಹದಿನೆಂಟು ಲಕ್ಷದ ಇಪ್ಪತ್ತೊಂದು ಸಾವಿರದ ಆರುನೂರು ರೂಪಾಯಿಗಳು ಮಾತ್ರ) ಗಳನ್ನು ಮೈಸೂರು ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

1. ಈ ಕಾರ್ಯಕ್ಕಾಗಿ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2230-ಕಾರ್ಮಿಕ ಮತ್ತು ಉದ್ಯೋಗ-01-ಕಾರ್ಮಿಕ-198-ಗ್ರಾಮ ಪಂಚಾಯಿತಿಗಳಿಗೆ ಸಹಾಯ-6-ಗ್ರಾಮ ಪಂಚಾಯಿತಿಗಳು-ಕೇಂದ್ರ ಪುರಸ್ಕೃತ ಯೋಜನೆ (ಜೀತದಾಳುಗಳ ಪುನರ್ವಸತಿ)-01-ಬ್ಲಾಕ್ ಅನುದಾನ-300-ಒಟ್ಟು ಜಿಲ್ಲಾ ಪಂಚಾಯಿತಿ (ಯೋಜನೆ) ಗೆ ಜಮಾ ಮಾಡತಕ್ಕದ್ದು.

2. ಈ ಆದೇಶದಲ್ಲಿ ನಮೂದಿಸಿರುವ ಜೀತ ವಿಮುಕ್ತರ ವಿವರಗಳನ್ನು ಉಪವಿಭಾಗಾಧಿಕಾರಿ, ಹುಣಸೂರು ರವರ ವರದಿಯ ಆಧಾರದಂತೆ ಪರಿಗಣಿಸಿ ಜೀತ ವಿಮುಕ್ತರಿಗೆ ತಕ್ಷಣದಿಂದಲೇ ಪರಿಹಾರ ನೀಡುವ ಅಗತ್ಯತೆ ಹಿನ್ನಲೆಯಲ್ಲಿ ಮಾಶಾಸನ ಮೊತ್ತವನ್ನು ಮಂಜೂರು ಮಾಡಲಾಗಿದ್ದು, ಸದರಿ ಜೀತ ವಿಮುಕ್ತರ ಇರುವಿಕೆಯ ಬಗ್ಗೆ ತಮ್ಮ ಜಿಲ್ಲೆಯ ಜಿಲ್ಲಾಧಿಕಾರಿ/ಉಪವಿಭಾಗಾಧಿಕಾರಿ, ಹುಣಸೂರು ಉಪವಿಭಾಗ ಇವರ ಮುಖಾಂತರ ಖಾತರಿ ಮಾಡಿಕೊಳ್ಳುವ ಮೂಲಕ ಮೊತ್ತವನ್ನು **ತಪ್ಪದೇ 15 ದಿನದೊಳಗಾಗಿ ಪಾವತಿಸಲು ಕ್ರಮ ಕೈಗೊಳ್ಳುವುದು ಹಾಗೂ ಈ ಜೀತವಿಮುಕ್ತರ ಪೂರ್ಣಮಾಹಿತಿಯನ್ನು ಹಾಗೂ ಅವರುಗಳಿಗೆ ಹಣ ಪಾವತಿಸಿರುವ ಮಾಹಿತಿಯನ್ನು ಪ್ರತ್ಯೇಕವಹಿಯಲ್ಲಿ ನಿರ್ವಹಿಸತಕ್ಕದ್ದು. ಬಿಡುಗಡೆಗೊಳಿಸಿದ ಅನುದಾನಕ್ಕೆ ಹಣ ಧೃಡೀಕರಣ ಪತ್ರವನ್ನು ಒಂದು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.** ಸರ್ಕಾರವು ಬಿಡುಗಡೆಗೊಳಿಸಿದ ಅನುದಾನವು 2013-14ನೇ ಸಾಲಿನಲ್ಲಿ ವ್ಯಪಗತವಾಗದಂತೆ ಕ್ರಮವಹಿಸುವುದು.

3. ಈ ಆದೇಶವನ್ನು ಆರ್ಥಿಕ ಇಲಾಖೆ (ವೆಚ್ಚ-5) ಇವರ ಸಹಮತಿ ಸಂ:ಆಇ 273 ವೆಚ್ಚ-6/2012 ದಿ:21-11-2013 ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Hemalatha

(ಪಿ.ಹೇಮಲತ)
ನಿರ್ದೇಶಕರು, [ಸ್ವಉಕಾ] ಮತ್ತು
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರುರವರಿಗೆ ಈ ಆದೇಶವನ್ನು ರಾಜ್ಯ ಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿ.

**ಪ್ರತಿಯನ್ನು:**

01 ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
02 ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ
03 ಉಪವಿಭಾಗಧಿಕಾರಿ ಹುಣಸೂರು ಉಪವಿಭಾಗ, ಹೆಚ್.ಡಿ ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ
04 ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಮೈಸೂರು
05 ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು/ಮುಖ್ಯಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು/ಉಪ ಕಾರ್ಯದರ್ಶಿ(ಅಭಿ), ಜಿಲ್ಲಾ ಪಂಚಾಯಿತಿ, ಮೈಸೂರು
06 ಕಾರ್ಯನಿರ್ವಾಹಕ ಅಧಿಕಾರಿ, ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ ಇವರಿಗೆ ಸೂಕ್ತ ಕ್ರಮಕ್ಕಾಗಿ
07 ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಪೋಡಿಯಂ ಬ್ಲಾಕ್, ಬೆಂಗಳೂರು
08 ನಿರ್ದೇಶಕರು, ಸ್ವ ಉದ್ಯೋಗ ಕಾರ್ಯಕ್ರಮಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
**09 ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು**
**10 ಜಿಲ್ಲಾ ಖಜಾನಾಧಿಕಾರಿ, ಮೈಸೂರು ಜಿಲ್ಲೆ.**
11 ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಕಾವೇರಿ ಭವನ, ಬೆಂಗಳೂರು
12 ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-6, ವಿಧಾನಸೌಧ, ಬೆಂಗಳೂರು
13 ಆಂತರಿಕ ಆರ್ಥಿಕ ಸಲಹೆಗಾರರು/ನಿರ್ದೇಶಕರು, ಯೋಉಮಾ ವಿಭಾಗ/ಪ್ರಧಾನ ಸಂಪಾದಕರು, ಕರ್ನಾಟಕ ವಿಕಾಸ ಮಾಹಿತಿ ಅಧಿಕಾರಿ (ವೆಬ್‌ಸೈಟ್ ವಿಭಾಗ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
14 ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂಚಾಯತ್‌ರಾಜ್)ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
15 ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
16 ಹೆಚ್ಚುವರಿ ಪ್ರತಿಗಳು.